ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಯು.ಜಿ.ಡಿ. ಕಾಮಗಾರಿ ಅವೈಜ್ಞಾನಿಕ ರೀತಿಯಲ್ಲಿ ನಡೆಯುತ್ತಿರುವ ಬಗ್ಗೆ

ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

617 (715) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನಲ್ಲಿ ನಡೆಯುತ್ತಿರುವ ಯು.ಜಿ.ಡಿ. ಕಾಮಗಾರಿಯು ಅವೈಜ್ಞಾನಿಕವಾಗಿದ್ದು ಈ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕಳಪೆ ಕಾಮಗಾರಿ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದೇ; (ವಿವರ ನೀಡುವುದು)

(ಆ) ಸರ್ಕಾರದಿಂದ ಬಂದ ಕೋಟ್ಯಾಂತರ ರೂಪಾಯಿ ಸರಿಯಾಗಿ ಉಪಯೋಗಿಸದೆ ಕಳಪೆ ಮಟ್ಟದ ಕಾಮಗಾರಿ ಮಾಡುತ್ತಿರುವ ಸದರಿ ಯು.ಜಿ.ಡಿ ಗುತ್ತಿಗೆ ಪಡೆದ ಸಂಸ್ಥೆಯ ವಿರುದ್ಧ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ? (ವಿವರ ನೀಡುವುದು)